ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**486**
ಸದಸ್ಯರ ಹೆಸರು	:	ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	**09-03-2020**
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

	ಪ್ರಶ್ನೆ	ಉತ್ತರ
(ಅ)	ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕು, ಲೊಕ್ಕನಹಳ್ಳಿ ಪಂಚಾಯತ್ ವ್ಯಾಪ್ತಿಯ ಬೈಲೂರು ಶಾಲಾ ಕಟ್ಟಡದ ಕಾಮಗಾರಿ ಯಾವಾಗ ಆರಂಭವಾಯಿತು; ಕಾಮಗಾರಿಯ ಅಂದಾಜು ಮೊತ್ತ ಎಷ್ಟು; ಕಾಮಗಾರಿ ಇನ್ನೂ ಪೂರ್ಣವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕು, ಲೊಕ್ಕನಹಳ್ಳಿ ಪಂಚಾಯತ್ ವ್ಯಾಪ್ತಿಯ ಬೈಲೂರು ಶಾಲಾ ಕಟ್ಟಡದ ಕಾಮಗಾರಿಯನ್ನು ದಿನಾಂಕ:16-07-2015 ರಂದು ಪ್ರಾರಂಭಿಸಲಾಗಿದೆ. ಕಾಮಗಾರಿಯ ಅಂದಾಜು ಮೊತ್ತ ರೂ.89.95 ಲಕ್ಷಗಳು. ಕಾಮಗಾರಿ ಪೂರ್ಣಗೊಂಡಿದೆ.
(ಆ)	ಶಾಲಾ ಕಟ್ಟಡಕ್ಕೆ ನೀರು ಮತ್ತು ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ; ಇನ್ನೂ ಯಾವ ಯಾವ ಕಾಮಗಾರಿಗಳು ಬಾಕಿ ಇವೆ;	ಶಾಲಾ ಕಟ್ಟಡಕ್ಕೆ ನೀರು ಮತ್ತು ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಯಾವ ಕಾಮಗಾರಿಗಳೂ ಬಾಕಿ ಇರುವುದಿಲ್ಲ.
(ಇ)	ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ;	ಉದ್ಭವಿಸುವುದಿಲ್ಲ.

ಇಪಿ 57 ಯೋಸಕ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು